8741595

# ಕರ್ನಾಟಕ ಸರ್ಕಾರ

ಸಂಖ್ಯೆ: ಅಪಜೀ 32 ಎಫ್‌ಪಿಸಿ 2024

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 16.10.2024.

**ಇಂದ,**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು -560 001.

**ಇವರಿಗೆ,**
ವ್ಯವಸ್ಥಾಪಕ ನಿರ್ದೇಶಕರು,
ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತ,
ವನವಿಕಾಸ, 18ನೇ ಅಡ್ಡ ರಸ್ತೆ,
ಮಲ್ಲೇಶ್ವರಂ,
ಬೆಂಗಳೂರು-560003.

**ಮಾನ್ಯರೇ,**

**ವಿಷಯ:** - ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತವು ಉತ್ಪಾದಿಸುವ ವಸ್ತುಗಳನ್ನು ಸರಬರಾಜು ಮಾಡಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ, 1999ರ ಕಲಂ 4(ಜಿ)ರಡಿ ವಿನಾಯಿತಿ ನೀಡುವ ಬಗ್ಗೆ.

**ಉಲ್ಲೇಖ:** - ತಮ್ಮ ಪತ್ರ ಸಂಖ್ಯೆ: ಕರಾಅಕೈನಿನಿ/ಟಿಇಸಿ/ಸಿಆರ್-83/ಪಾರದರ್ಶಕ/2023-24/742 ದಿನಾಂಕ: 15.03.2023, 02.09.2024.

Issue: 18/10/24 11:50
Dated:

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತವು (KSFIC) ಉತ್ಪಾದಿಸುವ ಉತ್ಪನ್ನಗಳನ್ನು ಸರ್ಕಾರಿ/ಸಾರ್ವಜನಿಕ ಉದ್ದಿಮೆಗಳು ರೂ. 1.00 ಕೋಟಿಯ ಮಿತಿಯಲ್ಲಿ 2024-25ನೇ ಸಾಲಿಗೆ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ, 1999ರ ಕಲಂ 4(ಜಿ)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಸಂಗ್ರಹಣಾ ಪ್ರಾಧಿಕಾರಿಯವರಿಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿ ಆರ್ಥಿಕ ಇಲಾಖೆಯಿಂದ ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ ಆಇ 591 ವೆಚ್ಚ-12/2024, ದಿನಾಂಕ: 08.10.2024 ಅನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

ಮುಂದುವರಿದು ನಿಗಮವು ತನ್ನ ಆಂತರಿಕ ಸಂಪನ್ಮೂಲಗಳನ್ನು ಮಾತ್ರ ಬಳಸಿ ಉತ್ಪನ್ನಗಳನ್ನು ತಯಾರಿಸಿ ಪೂರೈಕೆ/ಸರಬರಾಜು ಮಾಡಬೇಕು ಮತ್ತು ನಿಗದಿತ ಗುಣಮಟ್ಟವನ್ನು ಕಾಪಾಡಬೇಕು, ಉತ್ತಮ ಗುಣಮಟ್ಟದ ಉತ್ಪನ್ನಗಳನ್ನು ಸಮಂಜಸ ದರದಲ್ಲಿ ಸಂಗ್ರಹಿಸುವುದನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತ ರವರು ದೃಢಪಡಿಸಿಕೊಳ್ಳುವಂತೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,
16/10/24
(ಜಿ. ಮಂಜುಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ
(ಅರಣ್ಯ-ಎ)

ಸಂಖ್ಯೆ:ಆಇ 591 ವೆಚ್ಚ-12/2024
(ಇ-ಆಫೀಸ್ ಕಡತ)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ:08.10.2024

## ಅಧಿಸೂಚನೆ

ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತವು (KSFIC) ಉತ್ಪಾದಿಸುವ ಉತ್ಪನ್ನಗಳನ್ನು ಸರ್ಕಾರಿ/ಸಾರ್ವಜನಿಕ ಉದ್ದಿಮೆಗಳು ರೂ.1.00 ಕೋಟಿಯ ಮಿತಿಯಲ್ಲಿ 2024-25ನೇ ಸಾಲಿಗೆ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಸಂಗ್ರಹಣಾ ಪ್ರಾಧಿಕಾರಗಳಿಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ.

ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತವು (KSFIC) ತನ್ನ ಆಂತರಿಕ ಸಂಪನ್ಮೂಲಗಳನ್ನು ಮಾತ್ರ ಬಳಸಿ ಉತ್ಪನ್ನಗಳನ್ನು ತಯಾರಿಸಿ ಪೂರೈಕೆ /ಸರಬರಾಜು ಮಾಡಬೇಕು ಮತ್ತು ನಿಗದಿತ ಗುಣಮಟ್ಟವನ್ನು ಕಾಪಾಡಬೇಕು. ಉತ್ತಮ ಗುಣಮಟ್ಟದ ಸೇವೆಯನ್ನು ಸಮಂಜಸ ದರದಲ್ಲಿ ಸಂಗ್ರಹಿಸುವುದನ್ನು ಸಂಗ್ರಹಣಾ ಪ್ರಾಧಿಕಾರಗಳು ದೃಢಪಡಿಸಿಕೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕಾಂತಮ್ಮ ಎನ್.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ)

ಇವರಿಗೆ:

ಜಂಟಿ ನಿರ್ದೇಶಕರು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಆರ್.ವಿ.ಕಾಲೇಜು ಅಂಚೆ, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-59, ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಹಾಗೂ 25 ಮುದ್ರಿತ ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.

ಪ್ರತಿ:

(1) ಮಹಾಲೇಖಪಾಲರು (ಲೆಕ್ಕ ಮತ್ತು ಪರಿಶೋಧನೆ), ಬೆಂಗಳೂರು.
(2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.
(3) ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು-10 ಪ್ರತಿಗಳು.
(4) ಹೆಚ್ಚುವರಿ ಪ್ರತಿಗಳು.